<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ :- ಶ್ರೀ ಎ.ಎಸ್.ನಾಗರಾಜ್, ನಿವೃತ್ತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ-ವಿಭಾಗ, ಹಾಸನ ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಮಂಜೂರು ಮಾಡುವ ಬಗ್ಗೆ ಆದೇಶ

ಓದಲಾಗಿದೆ :-
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 80 ಇಎನ್‌ಕ್ಯೂ 2014, ದಿನಾಂಕ: 13.10.2014.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 80 ಇಎನ್‌ಕ್ಯೂ 2014, ದಿನಾಂಕ: 30.05.2015
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 80 ಇಎನ್‌ಕ್ಯೂ 2014, ದಿನಾಂಕ: 18.10.2016
4. ವಿಚಾರಣಾಧಿಕಾರಿಯವರ ವರದಿ ದಿನಾಂಕ: 02.08.2017.
5. ಸರ್ಕಾರದ ಆದೇಶ ಸಂಖೆ: ಗ್ರಾಅಪ 80 ಇಎನ್‌ಕ್ಯೂ 2014, ದಿನಾಂಕ: 12.04.2018.
6. ಶ್ರೀ ಎ.ಎಸ್.ನಾಗರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಯೋಜನಾ ಉಪ-ವಿಭಾಗ, ಹಾಸನ ಇವರ ಮನವಿ ದಿನಾಂಕ : 09.10.2018

*****

<u>ಪ್ರಸ್ತಾವನೆ :</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ದಿನಾಂಕ : 09.10.2018 ಶ್ರೀ ಎ.ಎಸ್.ನಾಗರಾಜ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಮನವಿಯಲ್ಲಿ ಯೋಜನಾ ಉಪ-ವಿಭಾಗ, ಹಾಸನ ಇಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಹಾಸನ ಜಿಲ್ಲೆ ಬೇಲೂರು ತಾಲ್ಲೂಕಿನ ಕೋಗೋಡು-ಬೊಮ್ಮನಹಳ್ಳಿಯಿಂದ ಟಿ-17 ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿಯನ್ನು ಕಳಪೆ ಗುಣಮಟ್ಟದಲ್ಲಿ ಅನುಷ್ಠಾನಗೊಳಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಕಾರಣರಾದ ಆರೋಪದ ಮೇಲೆ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಮೇಲೆ ಓದಲಾದ ಕ್ರಮಾಂಕ(1)ರ ದಿನಾಂಕ: 13.10.2014ರ ಆದೇಶದಲ್ಲಿ ಈ ಅಧಿಕಾರಿ ಸೇರಿದಂತೆ ಇನ್ನಿತರೆ ಇಬ್ಬರು ಅಧಿಕಾರಿ/ನೌಕರರನ್ನು ಸೇವೆಯಿಂದ ಅಮಾನತ್ತಿನಲ್ಲಿರಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶ ದಿನಾಂಕ 30.05.2015 ರಲ್ಲಿ ಶ್ರೀ ಎ.ಎಸ್.ನಾಗರಾಜ್, ಅವರ ವಿರುದ್ಧದ ಇಲಾಖಾ ವಿಚಾರಣೆಯಲ್ಲಿ ಕಾಯ್ದಿರಿಸಿ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್‌ಸ್ಥಾಪಿಸಲಾಗಿದೆ. ನಂತರ ಶ್ರೀ ಎ.ಎಸ್.ನಾಗರಾಜ್, ಇವರನ್ನೊಳಗೊಂಡಂತೆ ಪ್ರಕರಣದಲ್ಲಿ ಭಾಗಿಯಾಗಿದ್ದರೆನ್ನಲಾದ 4 ಜನ ಆರೋಪಿತ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮ 1957ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲುಕಾರಣ ಕೇಳುವ ನೋಟಿಸಿನೊಂದಿಗೆ ದೋಷಾರೋಪಣಾ ಪಟ್ಟಿ ಅನುಬಂಧ-1 ರಿಂದ 4 ನ್ನು ಜಾರಿ ಮಾಡಲಾಗಿತ್ತು. ಸದರಿ ಕಾರಣ ಕೇಳುವ ನೋಟಿಸಿಗೆ ಆಪಾದಿತ ಅಧಿಕಾರಿಯವರು ಸಲ್ಲಿಸಿದ್ದ ಲಿಖಿತ ಹೇಳಿಕೆಯನ್ನು ಸರ್ಕಾರವು ಒಪ್ಪದೇ ಪ್ರಕರಣದ ಬಗ್ಗೆ ವಿವರವಾದ ತನಿಖೆ ನಡೆಸಲು ಹಾಗೂ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯಲು ವಿವರವಾದ ಇಲಾಖಾ ವಿಚಾರಣೆಯನ್ನು

ನಡೆಸಲು ಮೇಲೆ ಓದಲಾದ ಕ್ರಮಾಂಕ (3)ರ ದಿನಾಂಕ: 18.10.2016ರ ಆದೇಶದಲ್ಲಿ ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ಹಾಸನ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಯವರು ಮೇಲೆ ಓದಲಾದ ಕ್ರಮಾಂಕ (4)ರ ದಿನಾಂಕ: 02.08.2017 ರಂದು ಸಲ್ಲಿಸಿದ್ದ ವಿಚಾರಣಾ ವರದಿಯಲ್ಲಿ ಆರೋಪಿತ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳು ಸಾಭೀತಾಗಿರುವುದಿಲ್ಲವೆಂದು ವರದಿಸಿರುವುದನ್ನು ಸರ್ಕಾರವು ಒಪ್ಪಿ ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿ/ನೌಕರರ ವಿರುದ್ಧದ ಶಿಸ್ತುಕ್ರಮವನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ದಿನಾಂಕ: 12.04.2018ರ ಆದೇಶದಲ್ಲಿ ಕೈಬಿಟ್ಟು ಆರೋಪಮುಕ್ತಗೊಳಿಸಲಾಗಿರುತ್ತದೆ.

ಶ್ರೀ ಎ.ಎಸ್.ನಾಗರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪವಿಭಾಗ ಹಾಸನ(ಪ್ರಸ್ತುತ ನಿವೃತ್ತ) ಇವರು ಮೇಲೆ ಓದಲಾದ ಕ್ರಮಾಂಕ (6)ರ ದಿನಾಂಕ; 31.05.2018ರ ಮನವಿಯಲ್ಲಿ ಅವರು ಅಮಾನತ್ತಿನಲ್ಲಿ ಕಳೆದ ಅವಧಿ ದಿನಾಂಕ: 18.10.2014 ರಿಂದ 30.05.2015ರ ವರೆಗಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ಕೋರಿರುತ್ತಾರೆ. ಸದರಿ ಅಧಿಕಾರಿಯವರ ಮನವಿಯನ್ನು ಪರಿಶೀಲಿಸಲಾಗಿದ್ದು, ಆರೋಪಿತ ಅಧಿಕಾರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಕೂಲಂಕಷವಾಗಿ ಇಲಾಖಾ ವಿಚಾರಣೆಯನ್ನು ಜರುಗಿಸಿ, ವಿಚಾರಣಾಧಿಕಾರಿಯವರು ವಿಚಾರಣೆ ನಡೆಸಿ ಸಲ್ಲಿಸಿದ್ದ ವಿಚಾರಣಾ ವರದಿಯಲ್ಲಿ ಸದರಿಯವರ ವಿರುದ್ಧದ ಆರೋಪಗಳು ಸಾಭೀತಾಗಿರುವುದಿಲ್ಲವೆಂದು ವರದಿಸಿರುವುದನ್ನು ಸರ್ಕಾರವು ಒಪ್ಪಿ, ಅವರ ವಿರುದ್ಧದ ಶಿಸ್ತುಕ್ರಮವನ್ನು ಕೈಬಿಟ್ಟಿರುವುದರಿಂದ ಅವರು ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ

**<u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 418 ಸೇಶಿಕಾ 2017, ಬೆಂಗಳೂರು, ದಿನಾಂಕ :16.11.2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ಎ.ಎಸ್.ನಾಗರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, (ಪ್ರಸಕ್ತ ನಿವೃತ್ತ) ಯೋಜನಾ ಉಪ-ವಿಭಾಗ, ಹಾಸನ ಇವರು ಅಮಾನತ್ತಿನಲ್ಲಿ ಕಳೆದ ದಿನಾಂಕ: 18.10.2014 ರಿಂದ 30.05.2015ರ ವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ನಿಯಮ 100 (3)ರ ಪ್ರಕಾರ ಕರ್ತವ್ಯದ ಅವಧಿಯೆಂದು ಪರಿಗಣಿಸಿ, ಇವರನ್ನು ಅಮಾನತ್ತುಗೊಳಿಸದೇ ಇದ್ದಿದ್ದರೆ ಇವರು ಪಡೆಯಲು ಹಕ್ಕುಳ್ಳವರಾಗಿರುತ್ತಿದ್ದ ಪೂರ್ಣ ವೇತನ ಮತ್ತು ಇತರೆ ಭತ್ಯೆಗಳನ್ನು ಸಂದಾಯ ಮಾಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/11/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

16/11/18

ಇವರಿಗೆ :-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1&2) / (ಆಡಿಟ್)

2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾಸನ ಜಿಲ್ಲಾ ಪಂಚಾಯತ್, ಹಾಸನ
5. ಸಂಬಂಧಿಸಿದ ನಿವೃತ್ತ ಅಧಿಕಾರಿಗೆ.

ಪ್ರತಿ ಮಾಹಿತಿಗಾಗಿ :

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ
2. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸುವ ಸಲುವಾಗಿ
3. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

*****



